**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/01/ಇಪಿಎಸ್/2024

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560001.
ದೂ. ಸಂ: 080-22200777
e-mail: dte.commissioner@gmail.com

ದಿನಾಂಕ: 09.01.2025.

**ಸುತ್ತೋಲೆ**

ವಿಷಯ: "ಯುವನಿಧಿ" ಯೋಜನೆಯ ಅಡಿಯಲ್ಲಿ ಅರ್ಹ ಫಲಾನುಭವಿಗಳ ನೋಂದಣಿ ಮಾಡುವ ಸಂಬಂಧ ಸಂಸ್ಥೆಗಳಲ್ಲಿ ವಿಶೇಷ ನೋಂದಣಿ ಅಭಿಯಾನ ಆಯೋಜಿಸಲು ಮತ್ತು "ಯುವನಿಧಿ ಸಹಾಯವಾಣಿ" ರಚಿಸುವ ಕುರಿತು.

ಉಲ್ಲೇಖ: ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಸುತ್ತೋಲೆ ಸಂಖ್ಯೆ: ಕಾಶಿಇ/46/ಯುವನಿಧಿ/2023-24/ವಿ.ವೇ, ದಿನಾಂಕ: 03.01.2025.

*-*-*-*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದ ಸುತ್ತೋಲೆಯಲ್ಲಿ ರಾಜ್ಯದ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 2023 ಹಾಗೂ 2024 ನೇ ಸಾಲಿನಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳ ನೋಂದಣಿಗಾಗಿ ಆಯಾ ಸಂಸ್ಥೆಗಳಲ್ಲಿ ಯುವನಿಧಿ ವಿಶೇಷ ನೋಂದಣಿ ಸಹಾಯ ಕೇಂದ್ರವನ್ನು ತೆರೆದು, ಕೇಂದ್ರಕ್ಕೆ ಅತ್ಯವಶ್ಯಕವಾಗಿ ಬೇಕಾದ ಗಣಕಯಂತ್ರ ವ್ಯವಸ್ಥೆ ಹಾಗೂ ಸಿಬ್ಬಂದಿ ನಿಯೋಜನೆ ಮಾಡಿಕೊಳ್ಳಲು ಸೂಚಿಸಲಾಗಿತ್ತು ಹಾಗೂ ಕಾಲೇಜು ಹಾಗೂ ಸ್ಥಳೀಯ ಮಟ್ಟದಲ್ಲಿ ಬ್ಯಾನರ್/ಪೋಸ್ಟರ್‌ಗಳನ್ನು ಅಳವಡಿಸಿ, ವ್ಯಾಪಕ ಪ್ರಚಾರವನ್ನು ಕೈಗೊಂಡು ಯುವನಿಧಿ ಯೋಜನೆಗೆ ಅತೀ ಹೆಚ್ಚಿನ ಸಂಖ್ಯೆಯಲ್ಲಿ ಅರ್ಹ ಅಭ್ಯರ್ಥಿಗಳನ್ನು ನೋಂದಾಯಿಸಲು "ಯುವನಿಧಿ ವಿಶೇಷ ನೋಂದಣಿ ಅಭಿಯಾನವನ್ನು" ದಿನಾಂಕ: 06.01.2025 ರಿಂದ 20.01.2025 ರವರೆಗೆ ಆಯೋಜಿಸಲು ಕೂಡ ಕ್ರಮ ವಹಿಸುವಂತೆ ಸೂಚಿಸಲಾಗಿತ್ತು.

ಪ್ರಯುಕ್ತ, ಪ್ರತಿ ಸಂಸ್ಥೆಗಳಲ್ಲಿ "ಯುವನಿಧಿ ಸಹಾಯವಾಣಿ" ರಚನೆ ಮಾಡಿರುವ ಬಗ್ಗೆ ಹಾಗೂ ಅಭ್ಯರ್ಥಿಗಳು ನೋಂದಣಿಯಾಗಿರುವ ಬಗ್ಗೆ ಫೋಟೋ ಸಹಿತ ವರದಿಯನ್ನು ತಾಂತ್ರಿಕ ಪರೀಕ್ಷಾ ಮಂಡಳಿಗೆ btejdexam@gmail.com ಮಿಂಚಂಚೆ ಮೂಲಕ ಕೂಡಲೇ ಕಳುಹಿಸಲು ಸೂಚಿಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ.

9/1/2025

ಇವರಿಗೆ:

ರಾಜ್ಯದ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳು ಮತ್ತು ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ – ಮಾಹಿತಿಗಾಗಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ.

ಪ್ರತಿ:

1. ಮಾನ್ಯ ಆಯುಕ್ತರ ಆಪ್ತಶಾಖೆ – ಮಾಹಿತಿಗಾಗಿ.
2. ಮಾನ್ಯ ನಿರ್ದೇಶಕರ ಆಪ್ತಶಾಖೆ – ಮಾಹಿತಿಗಾಗಿ.